# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 05 |
| ಸದಸ್ಯರ ಹೆಸರು | : | ಡಾ. ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 09.12.2024 |
| ಉತ್ತರಿಸುವವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 1243 ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಮತ್ತು ಪ್ರಸ್ತುತ ಕೆಲಸ ಮಾಡುತ್ತಿರುವ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಪ್ರಾಧ್ಯಾಪಕರ ವರ್ಗಾವಣೆಯ ಕಾರಣಕ್ಕಾಗಿ ಸಾವಿರಾರು ಅತಿಥಿ ಉಪನ್ಯಾಸಕರನ್ನು ಮುಂದುವರಿಸಲು ಮತ್ತು ಸೇವಾ ಭದ್ರತೆ ಒದಗಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು; | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಅಧ್ಯಾಪಕರ ಸಾಮಾನ್ಯ ವರ್ಗಾವಣೆ ಪ್ರಕ್ರಿಯೆ ಹಾಗೂ ಹೊಸದಾಗಿ ನೇಮಕಗೊಂಡ ಸಹಾಯಕ ಪ್ರಾಧ್ಯಾಪಕರಿಗೆ ಸ್ಥಳ ನಿಯುಕ್ತಿಗೊಳಿಸುವ ಸಲುವಾಗಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಅಧ್ಯಾಪಕರಿಗೆ ವಿಶೇಷ ವರ್ಗಾವಣೆ ಪ್ರಕ್ರಿಯೆ ನಡೆಸಲಾಗಿದ್ದು, ಸದರಿ ವಿಶೇಷ ವರ್ಗಾವಣೆ ಪ್ರಕ್ರಿಯೆ ಪೂರ್ಣಗೊಂಡ ನಂತರ ವರ್ಗಾವಣೆಗೊಂಡ ಅಧ್ಯಾಪಕರುಗಳು ಹಾಗೂ ಹೊಸದಾಗಿ ನೇಮಕಾತಿ ಹೊಂದಿದ ಸಹಾಯಕ ಪ್ರಾಧ್ಯಾಪಕರು ಸ್ಥಳ ನಿಯುಕ್ತಿಗೊಳಿಸಿದ ಸಂಬಂಧಪಟ್ಟ ಕಾಲೇಜುಗಳಲ್ಲಿ ಕಾರ್ಯವರದಿ ಮಾಡಿಕೊಳ್ಳಲಿರುವುದರಿಂದ ಕಾಲೇಜುಗಳಲ್ಲಿ ಕಾರ್ಯಭಾರದ ಹೆಚ್ಚಳ/ಕೊರತೆ ಉಂಟಾಗಲಿದ್ದ ಹಿನ್ನಲೆಯಲ್ಲಿ ಹಾಗೂ 2024-25ನೇ ಸಾಲಿನ ಶೈಕ್ಷಣಿಕ ಚಟುವಟಿಕೆಗಳು ಈಗಾಗಲೇ ಪ್ರಾರಂಭಗೊಂಡಿದ್ದ ಹಿನ್ನಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಈ ಹಿಂದಿನ ಶೈಕ್ಷಣಿಕ ಸಾಲಿನಲ್ಲಿ ಆಯ್ಕೆಗೊಂಡು ಕರ್ತವ್ಯ ನಿರ್ವಹಿಸುತ್ತಿದ್ದ/ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸೇವೆಯನ್ನು 2024-25ನೇ ಸಾಲಿಗೆ ತಾತ್ಕಾಲಿಕವಾಗಿ ಹಾಲಿ ಲಭ್ಯವಿರುವ ಕಾರ್ಯಭಾರಕ್ಕನುಗುಣವಾಗಿ ಮೆರಿಟ್ ಆಧಾರದ ಮೇಲೆ ಬಳಸಿಕೊಳ್ಳುವಂತೆ ಸೂಚಿಸಲಾಗಿರುತ್ತದೆ.<br><br>ಇಲಾಖೆಯಲ್ಲಿ ಅತಿಥಿ ಉಪನ್ಯಾಸಕರನ್ನು ಯಾವುದೇ ಖಾಲಿ ಹುದ್ದೆಗಳ ಎದುರಾಗಿ ನೇಮಕಾತಿ ಮಾಡಲಾಗುವುದಿಲ್ಲ. ಬದಲಾಗಿ, ಕಾಲೇಜುಗಳಲ್ಲಿ ಲಭ್ಯವಾಗುವ ಕಾರ್ಯಭಾರವನ್ನು ಮೊದಲು ಖಾಯಂ ಉಪನ್ಯಾಸಕರಿಗೆ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರಕ್ಕೆ ಮಾತ್ರ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಲಾಗುತ್ತದೆ. ಆದ್ದರಿಂದ ತಾತ್ಕಾಲಿಕ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ನೀಡಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ. |

| | | |
|---|---|---|
| ಆ) | ಯು.ಜಿ.ಸಿ., ಆದೇಶದಂತೆ ಪಿ.ಎಚ್.ಡಿ., ಇಲ್ಲದ ಅಥವಾ ನೆಟ್/ಸೆಟ್ ಉತ್ತೀರ್ಣರಾಗದ ಅತಿಥಿ ಉಪನ್ಯಾಸಕರು ಹತ್ತಾರು ವರ್ಷಗಳಿಂದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿದ್ದು, ಈ ರೀತಿಯ ಸುಮಾರು 5 ಸಾವಿರ ಅತಿಥಿ ಉಪನ್ಯಾಸಕರನ್ನು ಮುಂದುವರೆಸಲು ಮತ್ತು ಅವರ ಸೇವಾ ಭದ್ರತೆ ಕುರಿತು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ: | ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022ರ ಕಂಡಿಕೆ(6)ರಲ್ಲಿ "ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರಿಗೆ ನಿಗಧಿತ ವಿದ್ಯಾರ್ಹತೆಯನ್ನು ಹೊಂದಲು 3 ವರ್ಷಗಳ ಕಾಲಾವಕಾಶ ನೀಡಲಾಗಿರುತ್ತದೆ. 3 ವರ್ಷಗಳ ನಂತರ ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರ ನೇಮಕಾತಿಯನ್ನು ಸಂಪೂರ್ಣವಾಗಿ ನಿರ್ಬಂಧಿಸುವುದು" ಎಂಬುದಾಗಿ ಆದೇಶಿಸಲಾಗಿರುತ್ತದೆ.<br><br>ಅಲ್ಲದೆ, ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ, ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:23600/2023 ದಾಖಲಿಸಿದ್ದು, ಈ ಬಗ್ಗೆ ಮಾನ್ಯ ನ್ಯಾಯಾಲಯವು ದಿನಾಂಕ:05.09.2024 ರಂದು ತೀರ್ಪು ನೀಡಿ, ಅತಿಥಿ ಉಪನ್ಯಾಸಕರ ಆಯ್ಕೆಗೆ ಯು.ಜಿ.ಸಿ. ವಿದ್ಯಾರ್ಹತೆ (ಎನ್ಇಟಿ/ಎಸ್ಎಲ್ಇಟಿ/ ಪಿಹೆಚ್.ಡಿ) ಮಾನದಂಡವನ್ನು ಅನುಸರಿಸುವಂತೆ ಆದೇಶಿಸಿರುತ್ತದೆ. ಸರ್ಕಾರದ ವತಿಯಿಂದ ದಿನಾಂಕ:05.09.2024 ರ ತೀರ್ಪಿನ ವಿರುದ್ಧ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅಪೀಲು ಸಂಖ್ಯೆ:1578/2024 ನ್ನು ದಾಖಲಿಸಲಾಗಿರುತ್ತದೆ.<br><br>ತಾತ್ಕಾಲಿಕ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉನ್ಯಾಸಕರಿಗೆ ಸೇವಾ ಭದ್ರತೆ ನೀಡಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ. |
| ಇ) | ಅತಿಥಿ ಉಪನ್ಯಾಸಕರು ಪ್ರತಿ ವರ್ಷ ಎದುರಿಸುತ್ತಿರುವ ಅತಂತ್ರ ಸ್ಥಿತಿಗಳು, ಸೇವಾ ಹಿರಿತನದಲ್ಲಿ ಆಗುತ್ತಿರುವ ಅನ್ಯಾಯ, ಕಾಲೇಜುಗಳ ಪ್ರಾಂಶುಪಾಲರು ನಿರ್ಧರಿಸುವ ಕಾರ್ಯಭಾರ/ಶೋಷಣೆ ಮುಂತಾದ ಸಮಸ್ಯೆಗಳಿಗೆ ಸರ್ಕಾರವು ಯಾವ ಕ್ರಮಗಳನ್ನು/ಪರಿಹಾರಗಳನ್ನು ಕೈಗೊಂಡಿದೆ ? | ಇಲಾಖೆಯಲ್ಲಿ ಅತಿಥಿ ಉಪನ್ಯಾಸಕರನ್ನು ಯಾವುದೇ ಖಾಲಿ ಹುದ್ದೆಗಳ ಎದುರಾಗಿ ನೇಮಕಾತಿ ಮಾಡಲಾಗುವುದಿಲ್ಲ. ಬದಲಾಗಿ, ಕಾಲೇಜುಗಳಲ್ಲಿ ಲಭ್ಯವಾಗುವ ಬೋಧನಾ ಕಾರ್ಯಭಾರವನ್ನು ಮೊದಲು ಖಾಯಂ ಉಪನ್ಯಾಸಕರಿಗೆ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕೆ ಮಾತ್ರ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಲಾಗುತ್ತದೆ.<br><br>ಪ್ರತಿ ವರ್ಷವೂ ಅತಿಥಿ ಉಪನ್ಯಾಸಕರನ್ನು ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಮಾತ್ರ ತಾತ್ಕಾಲಿಕ ವ್ಯವಸ್ಥೆಯಡಿ ನೇಮಕ ಮಾಡಲಾಗುವುದರಿಂದ ಖಾಯಂ ಉಪನ್ಯಾಸಕರು ಹೊಸ ನೇಮಕಾತಿ/ವರ್ಗಾವಣೆ/ನಿಯೋಜನೆ ಇತ್ಯಾದಿ ಕಾರಣಗಳಿಂದ ಸಂಬಂಧಪಟ್ಟ ಕಾಲೇಜುಗಳಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ಸಂದರ್ಭದಲ್ಲಿ ಬೋಧನಾ ಕಾರ್ಯಭಾರದಲ್ಲಿ ಕೊರತೆಯಾದಾಗ ಆ ಕಾಲೇಜಿನ ಜ್ಯೇಷ್ಠತೆಯಲ್ಲಿ ಕಿರಿಯ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಬಿಡುಗಡೆಗೊಳಿಸಬೇಕಾಗಿದ್ದು, ಇದು ಸರ್ಕಾರದ ನಿಯಮಗಳನ್ವಯ ಸಹಜ ಪ್ರಕ್ರಿಯೆಯಾಗಿರುತ್ತದೆ. ಇದನ್ನು ಅತಿಥಿ ಉಪನ್ಯಾಸಕರ ನೇಮಕ |

| | | |
|---|---|---|
| | | ಸಂದರ್ಭದಲ್ಲಿ ಅವರ ಗಮನಕ್ಕೂ ಸಹ ತರಲಾಗಿರುತ್ತದೆ.<br><br>ಕೆಲವು ಕಾಲೇಜುಗಳಲ್ಲಿ ಆಯಾ ವಿಶ್ವವಿದ್ಯಾಲಯಗಳ ಪಠ್ಯಕ್ರಮದನ್ವಯ 3 & 4ನೇ ಸೆಮಿಸ್ಟರ್ ಅವಧಿಯಲ್ಲಿ Open Electives ವಿಷಯಗಳಲ್ಲಿ ಕಾರ್ಯಾಭಾರದಲ್ಲಿ ವ್ಯತ್ಯಾಸವಾಗುವುದರಿಂದ ಅತಿಥಿ ಉಪನ್ಯಾಸಕರಿಗೆ ನಿಗಧಿಪಡಿಸಿದ ಕಾರ್ಯಭಾರದಲ್ಲಿಯೂ ಸಹ ವ್ಯತ್ಯಾಸವಾಗುತ್ತದೆ.<br><br>ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಲ್ಲಿ ಸೇವಾ ಹಿರಿತನಕ್ಕೆ ಹೆಚ್ಚಿನ ಪ್ರಾಧಾನ್ಯತೆ ನಿಗಧಿಪಡಿಸಲಾಗಿದ್ದು, ಅದರನ್ವಯ ಸೇವಾ ಹಿರಿತನ ಹೊಂದಿದ ಅತಿಥಿ ಉಪನ್ಯಾಸಕರನ್ನು ಆಯ್ಕೆಗೆ ಪರಿಗಣಿಸಲಾಗುತ್ತಿದೆ. ಸೇವಾ ಹಿರಿತನವನ್ನು ಅತಿಥಿ ಉಪನ್ಯಾಸಕರು ಕರ್ತವ್ಯ ನಿರ್ವಹಿಸಿದ ಅವಧಿಯನ್ನು ಪರಿಗಣಿಸಿ, ಸಂಬಂದಪಟ್ಟ ಪ್ರಾಂಶುಪಾಲರು ದೃಢೀಕರಿಸುತ್ತಾರೆ. ಇದರಲ್ಲಿ ಯಾವುದೇ ತಾರತಮ್ಯಕ್ಕೆ ಅವಕಾಶವಿರುವುದಿಲ್ಲ.<br><br>ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಅಧ್ಯಾಪಕರು ಹಾಗೂ ಅತಿಥಿ ಉಪನ್ಯಾಸಕರ ನಡುವೆ ಯಾವುದೇ ಬೇಧ-ಭಾವ ತೋರದೆ ಗೌರವಯುತವಾಗಿ ನಡೆಸಿಕೊಳ್ಳುವಂತೆ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಚನೆ ನೀಡಲಾಗಿರುತ್ತದೆ. |

**ಸಂಖ್ಯೆ:ಇಡಿ 374 ಡಿಸಿಇ 2024 (ಇ)**

**(ಡಾ. ಎಂ. ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು,